# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2013 (2366)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿನ ಖಾಲಿ ಹುದ್ದೆ ತುಂಬಲು ಅನುಮತಿ ನೀಡುವ ಬಗ್ಗೆ

(ಅ) ರಾಜ್ಯದ ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಡಿಸೆಂಬರ್ 2015 ರವರೆಗೆ ಖಾಲಿ ಆಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಅವಧಿಯ ಖಾಲಿ ಇರುವ ಎಲ್ಲಾ ಹುದ್ದೆಗಳಿಗೂ ಅನುಮತಿ ನೀಡದೆ ಕೆಲವೇ ಹುದ್ದೆಗಳನ್ನು ಅನುಮೋದನೆ ಮಾಡಲು ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಡಿಸೆಂಬರ್ 2015 ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ, ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತುಂಬಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ ;

(ಈ) ಜನವರಿ 2016 ರಿಂದ 2020ರ ಡಿಸೆಂಬರ್‌ವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ ?